## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಗುನ್ನು ಪೂಜಾರಿ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿ, ಹೊರ್ತಿ ಗ್ರಾಮ ಪಂಚಾಯತಿ, ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ಧ ಲೋಕಾಯುಕ್ತ ಶಿಫಾರಸ್ಸಿನನ್ವಯ ಕ್ರಮವಹಿಸುವ ಬಗ್ಗೆ.

ಓದಲಾಗಿದೆ:

1) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 39 ಗ್ರಾಪಂಕಾ 2017, ದಿನಾಂಕ: 21.01.2017.
2) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ. ಉಪಲೋಕ್-1/ಡಿಇ/198/2017/ಎಆರ್ಇ-10, ದಿನಾಂಕ: 02.01.2019.
3) ಸರ್ಕಾರದ ಸಮಸಂಖ್ಯೆಯ ಎರಡನೇ ಕಾರಣ ಕೇಳಿ ನೋಟೀಸ್, ದಿನಾಂಕ 30.01.2019.

ಪ್ರಸ್ತಾವನೆ:

ಮೇಲೆ ಓದಲಾದ (1) ರಲ್ಲಿ, ಶ್ರೀ ಗುನ್ನು ಪೂಜಾರಿ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿ, ಹೊರ್ತಿ ಗ್ರಾಮ ಪಂಚಾಯತಿ, ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ಧ ಕೆಳಕಂಡ ಆರೋಪದ ಮೇಲೆ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಗಿತ್ತು.

"That, you DGO – Sri Gunnu Pujari, Retired Secretary – Horthi Grama Panchayath, Horthi, Indi Taluk, Vijayapura District, has committed misconduct by allotting a house to Sri Bhimasya Somalinga Kambale who is the husband of Ex.Member of Grama Panchayath Smt.Yellavva during 2006-07 under Grameena Ashraya Yojane under S.C quota through the certificate issued by the Tahsildar show that he belong to Hindu Gaaniga caste and subsidy amount of Rs.1200/- has been paid to 117 beneficiaries by cash for constructing toilet though they have not constructed the toilets except Suresh Pomu Chauhan and five of them are not residents of Horthi Village.

Thus you DGO, being a Government /public servant has failed to maintain absolute integrity besides devotion to duty and acted in a manner unbecoming of a Government Servant and thus committed misconduct as enumerated U/R 3(1) of Karnataka Civil Services (Conduct) Rules, 1966."

ಮೇಲೆ ಓದಲಾದ (2) ರಲ್ಲಿ, ತನಿಖಾಧಿಕಾರಿಗಳಾದ ಅಪರ ನಿಬಂಧಕರು, ವಿಚಾರಣೆಗಳು-10, ಕರ್ನಾಟಕ ಲೋಕಾಯುಕ್ತ ಇವರು ಪ್ರಕರಣದ ಬಗ್ಗೆ ವಿಚಾರಣೆ ನಡೆಸಿ ವರದಿ ಸಲ್ಲಿಸಿದ್ದು, ಆರೋಪಗಳು ಸಾಬೀತಾಗಿರುವ ಹಿನ್ನೆಲೆಯಲ್ಲಿ ಮಾನ್ಯ ಉಪಲೋಕಾಯುಕ್ತರು ದಿನಾಂಕ: 31.12.2018 ರ ವರದಿಯಲ್ಲಿ, ಶ್ರೀ ಗುನ್ನು ಪೂಜಾರಿ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿ, ಹೊರ್ತಿ ಗ್ರಾಮ ಪಂಚಾಯತಿ, ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರು ದಿನಾಂಕ: 31.05.2014 ರಂದು ನಿವೃತ್ತಿ ಹೊಂದಿದ್ದು, ಸದರಿಯವರಿಗೆ ಪಾವತಿಸಲಾಗುವ ಪಿಂಚಣಿಯಲ್ಲಿ ರೂ. 1,40,400/- ಗಳನ್ನು ವಸೂಲಿ ಮಾಡುವ ದಂಡನೆಯನ್ನು ವಿಧಿಸಲು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ (3) ರಲ್ಲಿ ಪ್ರಕರಣದ ಸಂಬಂಧ ಮಾನ್ಯ ಉಪಲೋಕಾಯುಕ್ತರು ದಂಡನೆ ವಿಧಿಸಲು ಶಿಫಾರಸ್ಸು ಮಾಡಿರುವ ಹಿನ್ನೆಲೆಯಲ್ಲಿ ಆಕ್ಷೇಪಣೆಗಳನ್ನು ಆಹ್ವಾನಿಸಿ ಸದರಿ ನೌಕರರಿಗೆ ಎರಡನೇ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಲಾಗಿತ್ತು.

ಶ್ರೀ ಗುನ್ನು ಪೂಜಾರಿ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿ, ಹೊರ್ತಿ ಗ್ರಾಮ ಪಂಚಾಯತಿ, ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ ರವರು ಸಾಕಷ್ಟು ಕಾಲಾವಕಾಶವನ್ನು ಕೊಟ್ಟರೂ ಸರ್ಕಾರದಿಂದ ಜಾರಿಗೊಳಿಸಲಾಗಿದ್ದ ಎರಡನೇ ಕಾರಣ ಕೇಳಿ ನೋಟೀಸ್‌ಗೆ ತಮ್ಮ ಲಿಖಿತ ಹೇಳಿಕೆಯನ್ನು ಸಲ್ಲಿಸಿರುವುದಿಲ್ಲ.

ಪ್ರಕರಣದ ಕುರಿತು ಅಪರ ನಿಬಂಧಕರು, ವಿಚಾರಣೆಗಳು-10, ಕರ್ನಾಟಕ ಲೋಕಾಯುಕ್ತ ರವರು ವಿಚಾರಣೆ ನಡೆಸಿ ಸಲ್ಲಿಸಿರುವ ವಿಚಾರಣಾ ವರದಿಯಲ್ಲಿ ಆಪಾದಿತ ನೌಕರರ ವಿರುದ್ಧದ ಆರೋಪಗಳು ಸಾಬೀತಾಗಿರುವುದಕ್ಕೆ ವಿವರವಾದ ಕಾರಣಗಳನ್ನು ನೀಡಿರುತ್ತಾರೆ. ಸದರಿ ವಿಚಾರಣಾ ವರದಿಯ ಪ್ರಮುಖ ಅಂಶಗಳನ್ನು ಈ ಕೆಳಕಂಡಂತೆ ಪುನರುಚ್ಛರಿಸಿದೆ:-

"35(3). In the present case, DGO did not appear and did not lead defense evidence to prove his contention/defense if any, although he has filed Written Statement of Defense. Hence, an adverse inference can also be drawn against him, as per Section 114 of the Indian Evidence Act, 1872.

36. It is worthwhile to note that, on bare reading Ex. P-1 to 16, it is very clear that, DGO allotted a house to Sri.Bhimasya Kambale, under S.C quota, though he is

Ganiga and subsidiary amount of Rs.1200/- each paid to 117 beneficiaries though they did not construct toilet/s and 5 of them are not residents of Horthi Village and thereby, DGO has committed misconduct.

37. On careful analysis and appreciation of oral and documentary evidence placed on record, it is manifestly clear that the depositions of PW 1 & 2 are fully corroborated and consistent with Ex P1 to 16 and the same are inspiring confidence of this enquiry authority to rely and to act upon and there is nothing brought on record to disbelieve the same.

38. For the reasons stated above and observations made in the light of depositions of PW 1 & 2 and relevant documents i.e Ex. P1 to 16 and relevant provisions of law and under the given set of facts and circumstances of this enquiry, I have arrived at inevitable conclusion to hold that the Disciplinary Authority through its presenting officer is successful in proving the charge framed and leveled against the DGO up to the standard of preponderance of probabilities, to record my finding, in the affirmative against DGO as proved."

ಸರ್ಕಾರವು ಪರಿಶೀಲಿಸಿ, ಈ ಹಿನ್ನೆಲೆಯಲ್ಲಿ, ವಿಚಾರಣಾ ವರದಿ ಹಾಗೂ ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸನ್ನು ಅಂಗೀಕರಿಸಿ, ಶ್ರೀ ಗುನ್ನು ಪೂಜಾರಿ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿ, ಹೊರ್ತಿ ಗ್ರಾಮ ಪಂಚಾಯತಿ, ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರಿಗೆ ಪಾವತಿಸಲಾಗುವ ಪಿಂಚಣಿಯಲ್ಲಿ ರೂ. 1,40,400/- ಗಳನ್ನು ವಸೂಲಿ ಮಾಡುವ ದಂಡನೆಯನ್ನು ವಿಧಿಸಲು ನಿರ್ಧರಿಸಿದೆ. ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 40 ಗ್ರಾಪಂಕಾ 2019, ಬೆಂಗಳೂರು, ದಿನಾಂಕ: 11.06.2019**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸರ್ಕಾರಿ ಸೇವಾ (ನಡತೆ) ನಿಯಮಾವಳಿ 1966ರ ನಿಯಮ 3(1) ನೇ ನಿಬಂಧನೆಯನ್ನು ಉಲ್ಲಂಘಿಸಿ ದುರ್ನಡತೆ ಎಸಗಿರುವ ಹಿನ್ನೆಲೆಯಲ್ಲಿ, ಮಾನ್ಯ ಉಪಲೋಕಾಯುಕ್ತರ ವರದಿಯಲ್ಲಿನ ಶಿಫಾರಸ್ಸಿನನ್ವಯ, ಶ್ರೀ ಗುನ್ನು ಪೂಜಾರಿ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿ, ಹೊರ್ತಿ ಗ್ರಾಮ ಪಂಚಾಯತಿ, ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮಗಳು, 1957 ರ ನಿಯಮ 214(1)(ಬಿ) ರನ್ವಯ ಸದರಿ ನೌಕರರಿಗೆ ಪಾವತಿಸಲಾಗುವ ಪಿಂಚಣಿಯಲ್ಲಿ ರೂ. 1,40,400/- ಗಳನ್ನು ವಸೂಲಿ ಮಾಡುವ ದಂಡನೆಯನ್ನು ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ,
ಮತ್ತು ಅವರ ಹೆಸರಿನಲ್ಲಿ,

12/6/19

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

11.6.19

ಗೆ,

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4) ಅಪರ ನಿಬಂಧಕರು, ವಿಚಾರಣೆಗಳು-10, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
5) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ವಿಜಯಪುರ ಜಿಲ್ಲಾ ಪಂಚಾಯತಿ, ವಿಜಯಪುರ.
6) ಕಾರ್ಯನಿರ್ವಾಹಕ ಅಧಿಕಾರಿ, ಇಂಡಿ ತಾಲ್ಲೂಕು ಪಂಚಾಯತಿ, ವಿಜಯಪುರ ಜಿಲ್ಲೆ. (ಸಂಬಂಧಿಸಿದ ನೌಕರರಿಗೆ ಆದೇಶದ ಪ್ರತಿಯನ್ನು ತಲುಪಿಸಿ, ಸರ್ಕಾರಕ್ಕೆ ಸ್ವೀಕೃತಿ ಸಲ್ಲಿಸುವಂತೆ ಕೋರಿದೆ.)
7) ಶ್ರೀ ಗುನ್ನು ಪೂಜಾರಿ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿ, ಹೊರ್ತಿ ಗ್ರಾಮ ಪಂಚಾಯತಿ, ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ.
8) ಗಣಕಕೋಶ, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ. – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
9) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.